**ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಮತ್ತು ಪದವಿ ಪೂರ್ವ ಕಾಲೇಜು ಉಪಪ್ರಾಂಶುಪಾಲರ ಸಂಘ (ರಿ)**

SSLC MIDTERM EXAMINATION SEPTEMBER 2019

**ಹತ್ತನೆಯ ತರಗತಿ ಅರ್ಧವಾರ್ಷಿಕ ಪರೀಕ್ಷೆ – ಸೆಪ್ಟೆಂಬರ್ 2019**

Time : 3 hours **ವಿಷಯ : ಪ್ರಥಮಭಾಷೆ ಕನ್ನಡ.** Max Marks : - 100

Total No. of Questions : 45 CCE RF Code No. 01-K

**ಸೂಚನೆಗಳು :** 1) ಪ್ರಶ್ನೆ ಪತ್ರಿಕೆಯು ಒಟ್ಟು 45 ವಸ್ತುನಿಷ್ಠ ಹಾಗೂ ವಿಷಯನಿಷ್ಠ ಪ್ರಶ್ನೆಗಳನ್ನು ಒಳಗೊಂಡಿದೆ.

2) ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೇಟ್ ಮೂಲಕ ಮೊಹರು (ಸೀಲು) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತಿರಿಸಿ ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3) ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿರಿ.

4) ಬಲಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗೆ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5) ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15ನಿಮಿಷಗಳು ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿ ಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ಕೊಡಲಾಗಿದೆ.

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ.** **06*1=06**

**1.** ಇವುಗಳಲ್ಲಿ ಸಪ್ತಮೀ ವಿಭಕ್ತಿಯಿಂದ ಕೂಡಿರುವ ಪದ ;
(ಎ) ಮಳೆಗಾಲ (ಬಿ) ಊರೂರು (ಸಿ) ಶಾಲೆಯಲ್ಲಿ (ಡಿ) ಮರವನ್ನು

**2.** 'ಬೃಹಚ್ಛತ್ರ' ಪದವು ಈ ಸಂಧಿಗೆ ಉದಾಹರಣೆಯಾಗಿದೆ;
(ಎ) ಜಶ್ತ್ವ (ಬಿ) ಶ್ಚುತ್ವ (ಸಿ) ಅನುನಾಸಿಕ (ಡಿ) ಆದೇಶ

**3.** ಹೆಚ್ಚಿನ ವಿವರಣೆ ಅರ್ಥವನ್ನು ನೀಡುವ ಸಂದರ್ಭದಲ್ಲಿ ಈ ಲೇಖನ ಚಿಹ್ನೆಯನ್ನು ಬಳಸಲಾಗುವುದು;
(ಎ) ಪೂರ್ಣವಿರಾಮ (ಬಿ) ಅಲ್ಪವಿರಾಮ (ಸಿ) ಅರ್ಧವಿರಾಮ (ಡಿ) ಆವರಣ

**4.** ಸ್ವತಂತ್ರ ವಾಕ್ಯಗಳಾಗಿ ನಿಲ್ಲಬಲ್ಲ ಅನೇಕ ಉಪವಾಕ್ಯಗಳೊಡನೆ ಒಂದು ಪೂರ್ಣಾಭಿಪ್ರಾಯದ ವಾಕ್ಯವಾಗಿದ್ದರೆ ಅಂತಹ ವಾಕ್ಯ;
(ಎ) ಸಾಮಾನ್ಯ ವಾಕ್ಯ (ಬಿ)ಮಿಶ್ರ ವಾಕ್ಯ (ಸಿ) ಸಂಯೋಜಿತ ವಾಕ್ಯ (ಡಿ) ಪ್ರಶ್ನಾರ್ಥಕ ವಾಕ್ಯ

**5.** 'ಮಾದ್ರಮಾಗಧಯಾದವರು' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ;
(ಎ) ಕರ್ಮಧಾರಯ (ಬಿ) ದ್ವಂದ್ವ (ಸಿ) ತತ್ಪುರುಷ (ಡಿ) ಬಹುವ್ರೀಹಿ

**6.** 'ಆದ್ದರಿಂದ' ಪದವು ಈ ಅವ್ಯಯಕ್ಕೆ ಉದಾಹರಣೆಯಾಗಿದೆ ;
(ಎ) ಅನುಕರಣಾವ್ಯಯ (ಬಿ) ಸಾಮಾನ್ಯಾವ್ಯಯ (ಸಿ) ಸಂಬಂಧಾರ್ಥಕಾವ್ಯಯ (ಡಿ) ಅನುಕರಣಾವ್ಯಯ

**II. ಕೆಳಗಿನ ಪ್ರಶ್ನೆಗಳಿಗೆ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ.** **4*1=4**

**7.** ಕೊಡಲಿ : ಕುಠಾರ :: ಸಕ್ಕರೆ : ________

**8.** ಮೇಜು : ಪೋರ್ಚುಗೀಸ್ :: ಕಾರ್ಖಾನೆ : ________

**9.** ಶೌರಿ : ಕೃಷ್ಣ :: ಮೇಧಿನಿ : ________

**10.** ಬಟ್ಟಬಯಲು : ದ್ವಿರುಕ್ತಿ :: ಕೆನೆಮೊಸರು : ________



Use E-Papers, Save Trees
Above line hide when print out

**III. ಕೆಳಗಿನ ಪ್ರಶ್ನೆಗಳಿಗೆ ಪ್ರತಿಯೊಂದಕ್ಕೂ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ. 07*1=07**

**11.** ಗಡಿ ಪ್ರದೇಶದಲ್ಲಿ 'ಬ್ಲಾಕ್ ಔಟ್' ನಿಯಮವನ್ನು ಏತಕ್ಕಾಗಿ ಪಾಲಿಸಲಾಗುತ್ತದೆ ?

**12.** ರಾಮಲಕ್ಷ್ಮಣರಿಗೆ ಮತಂಗಾಶ್ರಮಕ್ಕೆ ಹೋಗಲು ಸೂಚಿಸಿದವರು ಯಾರು ?

**13.** ರಾಮಲಕ್ಷ್ಮಣರು ಶಬರಿಯ ರೂಪದಲ್ಲಿ ಯಾರನ್ನು ಕಂಡರು ?

**14.** ಮೈಸೂರು ಸಂಸ್ಥಾನದ ಸರ್ವಾಂಗೀಣ ಅಭಿವೃದ್ಧಿಗಾಗಿ ಕಂಕಣಬದ್ಧರಾದ ರಾಜಶ್ರೇಷ್ಠ ಯಾರು ?

**15.** ಕವಿ ಶಿವರುದ್ರಪ್ಪರವರು ಯಾವುದು ಕಲುಷಿತವಾಗಿದೆ ಎಂದಿದ್ದಾರೆ ?

**16.** ಹಲಗಲಿ ಲಾವಣಿಗೆ ಕಾರಣವಾದ ಘಟನೆ ಯಾವುದು ?

**17.** ಪುಟ್ಟ ಪೋರಿ ಏನು ಮಾಡುತ್ತಿದ್ದಾಳೆ ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು – ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 10*2=20**

**18.** ನಿರ್ಜೀವವಾಗಿರುವ ಮಗುವನ್ನು ನೋಡಿ ಮುದುಕಿ ನಿರಾಶೆಯಿಂದ ಹೇಳಿದ್ದೇನು ?

**19.** ರಾಮಲಕ್ಷ್ಮಣರ ಸ್ವಾಗತಕ್ಕಾಗಿ ಶಬರಿ ಮಾಡಿಕೊಂಡಿದ್ದ ಸಿದ್ಧತೆಗಳೇನು ?

**20.** ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ನೀರಾವರಿ ಯೋಜನೆಗಳು ಕಾರ್ಯರೂಪಕ್ಕೆ ಬಂದವು?

**21.** ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು ಏನೆಂದು ಹೇಳಿದ್ದಾರೆ ?

**22.** ಹಕ್ಕಿಯು ಹೊಸಗಾಲದ ಹಸುಮಕ್ಕಳನ್ನು ಹರಸಿದ ರೀತಿಯನ್ನು ತಿಳಿಸಿ.

**23.** ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು ?

**24.** ಜಾತಿ ವ್ಯವಸ್ಥೆಯ ಬಗೆಗೆ ವಿವೇಕಾನಂದರ ಅಭಿಪ್ರಾಯವೇನು ?

**25.** ವಿವೇಕಾನಂದರ ವ್ಯಕ್ತಿತ್ವ ಇಂದಿಗೂ ಸತ್ಯ ಏಕೆ?

**26.** ವಸಂತ ಯಾರು ಯಾರಿಗೆ ಮುಖ ತೋರಲಿಲ್ಲ ? ಹಾಗೂ ಪುಟ್ಟಿಯ ಮನದಲ್ಲಿ ಮೂಡಿದ ಪ್ರಶ್ನೆಗಳೇನು ?

**27.** ಭಗತ್ ಸಿಂಗ್ ಹಾಗೂ ಅವನ ಸಹಚರರು ಹೇಗೆ ಅಮರರಾದರು ?

**V. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ. 6*3=18**

**28.** "ಆಗಲೂ ಯುದ್ಧವಾಗಿತ್ತಾ ಅಜ್ಜಿ ?"

**29.** "ಉರಿವ ಬತ್ತಿಯ ಕರುಕ ಕಾಣರು"

**30.** "ತಾವು ಕಡಿಮೆ ಮಾತನಾಡಿದ್ದೀರಿ; ಹೆಚ್ಚು ಕೆಲಸ ಮಾಡಿದ್ದೀರಿ"

**31.** "ಹೊಸ ಎಚ್ಚರದೊಳು ಬದುಕೋಣ"

**32.** "ಕೆಟ್ಟು ವರ್ಣಿಸಿ ಹೇಳಿದೆ ಕಂಡಷ್ಟು"

**33.** "ಕುರುಪತಿಗೆ ಕೇಡಾದುದೆಂದನು ತನ್ನ ಮನದೊಳಗೆ"

**VI. ಕೆಳಗಿನ ಕವಿ / ಸಾಹಿತಿಗಳ ಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ. 2*3=6**

**34.** ವಿ ಕೃ ಗೋಕಾಕ್

**35.** ದ. ರಾ. ಬೇಂದ್ರೆ



Use E-Papers, Save Trees
Above line hide when print out

**VII. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗಿಸಿ, ಛಂದಸ್ಸಿನ ಹೆಸರನ್ನು ಬರೆಯಿರಿ.** **1*3=3**

**36.** ಹೊರೆದ ದಾತಾರಂಗೆ ಹಗೆವರ

ಶಿರವನರಿದೊಪ್ಪಿಸುವೆನೆಂಬೀ

ಭರದೊಳಿರ್ದೆನು ಕೌರವೇಂದ್ರನ ಕೊಂದೆ ನೀನೆಂದ ॥

**VIII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು ಸಮನ್ವಯಗೊಳಿಸಿರಿ.** **1*3=3**

**37.** ಒಳಗಿನ ಮಂದಿ ಗುಂಡು ಹೊಡೆದರೋ ಮುಂಗಾರಿ ಸಿಡಿಲ ಸಿಡಿದ್ಹಾಂಗ

**IX. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ.** **1*3=3**

**38.** ಎ) ಮನಸ್ಸಿದ್ದರೆ ಮಾರ್ಗ.

ಬಿ) ತಾಳಿದವನು ಬಾಳಿಯಾನು.

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.** **1*4=4**

**39.** ಕಲುಷಿತವಾದಿ ________ ಅಥವಾ ಮತಗಳೆಲ್ಲವು ________

________ ________

________ ________

________ಮುಟ್ಟೋಣ ________ಬಿತ್ತೋಣ.

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥ ಮಾಡಿಕೊಂಡು ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶವನ್ನು ಬರೆಯಿರಿ.** **1*4=4**

**40.** ವೀರ ಕೌರವರಾಯನೇ ದಾ

ತಾರನಾತನ ಹಗೆಯೆ ಹಗೆ ಕೈ

ವಾರವೇ ಕೈವಾರವಾದಂತಹೆನು ಕುರುನೃಪತಿ

ಶೌರಿ ಕೇಳೈ ನಾಳೆ ಸಮರದ

ಸಾರದಲಿ ತೋರುವೆನು ನಿಜಭುಜ

ಶೌರಿಯದ ಸಂಪನ್ನತನವನು ಪಾಂಡುತನಯರಲಿ ॥

**XII ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **2*4=8**

**41.** ಲಂಡನ್ ನಗರ ವೀಕ್ಷಣೆಯಲ್ಲಿ ಲೇಖಕರು ಗುರುತಿಸಿರುವ ವಿಶೇಷತೆಗಳೇನು? ತಿಳಿಸಿ.

**ಅಥವಾ**

'ವೆಸ್ಟ್ ಮಿನ್‌ಸ್ಟರ್ ಅಬೆ' ಪ್ರಾರ್ಥನಾ ಮಂದಿರ ಒಂದು ಮಹಾಕೋಶದಂತಹ ವಿಶೇಷ ಸ್ಮಾರಕ ವಿವರಿಸಿ.

**42.** ಹಕ್ಕಿಯನ್ನು ಕಾಲಗತಿಗೆ ಹೋಲಿಸುತ್ತಾ ಕವಿ ಬೇಂದ್ರೆಯವರು ಹೇಳಿರುವ ಮಾತುಗಳಾವುವು ?

ಅಥವಾ

ಕಾಲದ ಮುಂದೆ ಎಲ್ಲರೂ ತಲೆಬಾಗಲೇಬೇಕು ಎಂಬುದನ್ನು ಕವಿ ಹೇಗೆ ಸಾಧಿಸಿದ್ದಾರೆ. ವಿವರಿಸಿ.



Use E-Papers, Save Trees
Above line hide when print out

**XIII ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ. 01*04=04 (2+2)**

**43**. ರಾಮಕೃಷ್ಣ ಪರಮಹಂಸರು ಪರಮದೈವಭಕ್ತ. ಯಾವಾಗಲೂ ದೇವರನ್ನು ಕುರಿತು ಚಿಂತಿಸುತ್ತಿದ್ದರು. ಅವರಿಗೆ ಎಲ್ಲರಲ್ಲಿಯೂ ದೇವರ ಭಾವನೆಯಿತ್ತು. ಅವರು ಸಾಧಾರಣ ಗುರುಗಳಲ್ಲ. ದೇವರನ್ನು ನೋಡುವ ಶಕ್ತಿಯ ಮಟ್ಟದಲ್ಲಿರುವ ಗುರುಗಳು. ಧ್ಯಾನ ಮಾಡುವಾಗಲೆಲ್ಲಾ ದೇವರ ಜೊತೆ ಮಾತನಾಡುತ್ತಾ ಕಾಲ ಕಳೆಯುತ್ತಿದ್ದರು ಎಂದು ಅವರ ಶಿಷ್ಯರು ಹೇಳುತ್ತಿದ್ದರು. ಅವರು ಹೇಳುತ್ತಿದ್ದರು "ಮುಗ್ಧ ಮನಸ್ಸುಳ್ಳವರು ದೊಡ್ಡ ಜ್ಞಾನಿಗಳಾಗುವರು". ಅವರ ಮನಸ್ಸನ್ನು ನಾವು ಅರ್ಥ ಮಾಡಿಕೊಂಡರೆ ಅವರೆಷ್ಟು ಮಹಾತ್ಮರೆಂದು ಗೊತ್ತಾಗುವುದು. ಅವರು ಎಲ್ಲಾ ಧರ್ಮಗಳನ್ನು ಹಾಗೂ ದೇವರನ್ನು ಗೌರವದಿಂದ ನೋಡುತ್ತಿದ್ದರು. ರಾಮಕೃಷ್ಣರು ತಮ್ಮ ಪತ್ನಿ ಶಾರದಾದೇವಿಯವರನ್ನು ತಾಯಿಯ ಭಾವನೆಯಿಂದ ನೋಡುತ್ತಿದ್ದರು. ಅವರು ಶಾರದಾದೇವಿಯವರನ್ನು ತಾಯಿ–ಮಗು ಭಾವನೆಯಿಂದ ನೋಡುತ್ತಿದ್ದರು. ಶಾರದಾದೇವಿಯವರಿಗೆ ಆರೋಗ್ಯ ಸರಿ ಇಲ್ಲದಿರುವಾಗ ಮಹಿಳೆಯರನ್ನು ಕಳುಹಿಸಿ ಶುಶ್ರೂಷೆ ಮಾಡಿಸುತ್ತಿದ್ದರು. ಶಾರದಾಮಾತೆಗೆ ಒಂದು ಚೂರು ನೋವಾಗದಂತೆ ಹೂವಿನ ತರಹ ನೋಡಿಕೊಳ್ಳುತ್ತಿದ್ದರು. ಅವರ ಗುಣಗಳು, ಆದರ್ಶಗಳು ತುಂಬಾ ಅದ್ಭುತ. ಅವರಿಂದಲೇ ವಿವೇಕಾನಂದ ಜಗತ್ತಿನಲ್ಲಿ ಮಹಾನ್ ವ್ಯಕ್ತಿಯಾಗಿದ್ದು.

ಪ್ರಶ್ನೆಗಳು :

1) ರಾಮಕೃಷ್ಣ ಪರಮಹಂಸರ ಬಗ್ಗೆ ಅವರ ಶಿಷ್ಯರ ಅಭಿಪ್ರಾಯವೇನು ?

2) ಪರಮಹಂಸರು ಶಾರದಾದೇವಿಯವರ ಮೇಲೆ ಹೇಗೆ ಕಾಳಜಿ ವಹಿಸುತ್ತಿದ್ದರು ?

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ. 1*5=5**

**44.** ನಿಮ್ಮನ್ನು ಬೆಳಗಾವಿ ಜಿಲ್ಲೆಯ ನವಿಲುತೀರ್ಥದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ 'ಪ್ರಜ್ವಲ್' ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ನಡೆದ 'ಶಿಕ್ಷಕ ದಿನಾಚರಣೆ' ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವಂತೆ ಕೋರಿ, ಬೆಳಗಾವಿಯಲ್ಲಿರುವ ವಿಜಯ ಕರ್ನಾಟಕ ದಿನಪತ್ರಿಕೆಯ ಸಂಪಾದಕರಿಗೆ ಮನವಿ ಪತ್ರ ಬರೆಯಿರಿ.

ಅಥವಾ

ನಿಮ್ಮನ್ನು ರಾಮನಗರ ಜಿಲ್ಲೆಯ ಕನಕಪುರದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿ ಎಂದು ಭಾವಿಸಿಕೊಂಡು, ಬೆಂಗಳೂರಿನ ರಾಜಾಜಿನಗರದ ನಿವಾಸಿಯಾದ ನಿಮ್ಮ ಗೆಳೆಯ / ಗೆಳತಿಗೆ ನಿಮ್ಮ ವಿದ್ಯಾಭ್ಯಾಸದ ಪ್ರಗತಿಯನ್ನು ತಿಳಿಸಿ ಪತ್ರ ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ. 1*5=5**

**45.** ಎ) ಜ್ಞಾನಾರ್ಜನೆಯಲ್ಲಿ ಗ್ರಂಥಾಲಯಗಳ ಮಹತ್ವ

ಬಿ) ಅತಿವೃಷ್ಟಿಯಿಂದಾಗುವ ಪರಿಣಾಮಗಳು.

---- 0 0 0 0 ----



Use E-Papers, Save Trees
Above line hide when print out